ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 11-02-2015

## ಪತ್ರಿಕಾ ಪ್ರಕಟಣೆ

# ಏಪ್ರಿಲ್‌ನೊಳಗೆ 3000 ಹೆಕ್ಟೇರ್ ಜಮೀನಿಗೆ ನೀರಾವರಿ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ವಾರಾಹಿ ನೀರಾವರಿ ಯೋಜನೆಯಡಿ ಏಪ್ರಿಲ್ ಮಾಹೆಯೊಳಗೆ 3000 ಹೆಕ್ಟೇರ್ ಜಮೀನಿಗೆ ನೀರಾವರಿಯನ್ನು ಒದಗಿಸಲಾಗುವುದೆಂದು ಜಲಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿಂದು ಮಾಜಿ ಮುಖ್ಯಮಂತ್ರಿ ದಿವಂಗತ ಗುಂಡೂರಾವ್ ಅವರ ಕಾಲದಲ್ಲಿಯೇ 9.43 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿತ್ತು. ಆದರೆ 1980 ರಿಂದ 2001 ರ ವರೆಗೆ ಈ ಕುರಿತು ಬರೀ ಚರ್ಚೆಯನ್ನು ನಡೆಸುವ ಮೂಲಕ ಸಮಯವನ್ನು ವ್ಯರ್ಥ ಮಾಡಲಾಯಿತು ಎಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಕೆ. ಪ್ರತಾಪ ಚಂದ್ರಶೆಟ್ಟಿ ಅವರು ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ನೀರಾವರಿ ಸೌಲಭ್ಯ ಒದಗಿಸುವ ಜೊತೆಗೆ ವಿದ್ಯುತ್ ಉತ್ಪಾದಿಸುವ ಕುರಿತು ವಿವಿಧ ಇಲಾಖೆಗಳೊಂದಿಗೆ ಚರ್ಚೆ ನಡೆಸಲಾಗಿ, ಅರಣ್ಯ ಮತ್ತು ಪರಿಸರ ಸಂರಕ್ಷಣೆಯ ಉದ್ದೇಶದಿಂದ ವಿದ್ಯುತ್ ಉತ್ಪಾದನಾ ಘಟಕವನ್ನು ಕೈ ಬಿಟ್ಟು ನೀರಾವರಿ ಯೋಜನೆಯನ್ನು ಮಾತ್ರ ಕೈಗೆತ್ತಿಕೊಳ್ಳಲಾಗಿದೆ. ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಇಲಾಖೆಯವರು 260 ಹೆಕ್ಟೆರ್ ರಕ್ಷಿತಾರಣ್ಯ ಪ್ರದೇಶದಲ್ಲಿ 129.60 ಹೆಕ್ಟೇರ್ ಪ್ರದೇಶವನ್ನು ಈ ಯೋಜನೆಗೆ ಬಿಡುಗಡೆಗೊಳಿಸಲು ತಾತ್ವಿಕವಾಗಿ ಒಪ್ಪಿಗೆ ನೀಡಿರುವ ಹಿನ್ನೆಲೆಯಲ್ಲಿ ಮೂಲ ಯೋಜನೆಯಲ್ಲಿದ್ದ ಕಾಲುವೆಗಳ ಉದ್ದವನ್ನು ಕಡಿಮೆಗೊಳಿಸಲಾಗಿದೆ. ಹಾಗೆಯೇ 15718 ಹೆಕ್ಟೇರ್ ಇದ್ದ ಮೂಲ ಅಚ್ಚುಕಟ್ಟು ಪ್ರದೇಶದಲ್ಲಿ 702 ಹೆಕ್ಟೇರ್ ಅಚ್ಚುಕಟ್ಟನ್ನು ಕಡಿಮೆ ಮಾಡಲಾಗಿದೆ ಎಂದು ಹೇಳಿದರು.

ಬಾಬು/ಬಿಜಿಪಿ/ಕೆಎಂ

# ಬಡ ರೈತರ ಜಮೀನನ್ನು ತೆರವುಗೊಳಿಸುವುದಿಲ್ಲ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ಮೂರರಿಂದ ಐದು ಎಕರೆ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ಕೃಷಿ ಚಟುವಟಿಕೆಯಲ್ಲಿ ತೊಡಗಿರುವ ಬಡ ರೈತರ ಜಮೀನನ್ನು ಯಾವುದೇ ಕಾರಣಕ್ಕೂ ತೆರವುಗೊಳಿಸಲಾಗುವುದಿಲ್ಲವೆಂದು ಕಂದಾಯ ಸಚಿವ ವಿ. ಶ್ರೀನಿವಾಸಪ್ರಸಾದ್ ಭರವಸೆ ನೀಡಿದರು.

ವಿಧಾನ ಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಅಲ್ಲಮಪ್ರಭು ಪಾಟೀಲ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯಾದ್ಯಂತ 2 ಲಕ್ಷ 91 ಸಾವಿರದಷ್ಟು ಎಕರೆಯಷ್ಟು ಸರ್ಕಾರಿ ಜಮೀನನ್ನು ಬಡ ರೈತರು ಒತ್ತುವರಿ ಮಾಡಿದ್ದಾರೆ. ಅದೇ ರೀತಿ 5 ರಿಂದ 10 ಎಕರೆಯಷ್ಟು ಒತ್ತುವರಿ ಮಾಡಿರುವುದು ಸುಮಾರು 43 ಸಾವಿರ ಎಕರೆ ಇದ್ದರೆ, 10 ಎಕರೆಗಿಂತ ಮೇಲ್ಪಟ್ಟು ಒತ್ತುವರಿ ಮಾಡಿರುವುದು 41 ಸಾವಿರ ಎಕರೆಯಷ್ಟಿದೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

ಸರ್ಕಾರಿ ಜಮೀನುಗಳ ಒತ್ತುವರಿಯನ್ನು ತೆರವುಗೊಳಿಸಲು ಸಾರ್ವಜನಿಕ ಹಿತಾಸಕ್ತಿ ಪ್ರಕರಣವು ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಅದರಂತೆ ಒತ್ತುವರಿ ತೆರವುಗೊಳಿಸಲು ಕ್ರಿಯಾ ಯತೋಜನೆಯನ್ನು ತಯಾರಿಸಿ ಒತ್ತುವರಿ ತೆರವುಗೊಳಿಸಲಾಗುತ್ತಿದೆ. 3 ರಿಂದ 5 ಎಕರೆಯಷ್ಟು ಒತ್ತುವರಿಮಾಡಿಕೊಂಡಿರುವ ಬಡ ರೈತರನ್ನು ಬಿಟ್ಟು 5 ಕ್ಕಿಂತ ಹೆಚ್ಚು ಎಕರೆ ಭೂಮಿಯನ್ನು ಒತ್ತುವರಿ ಮಾಡಿರುವವರ ವಿರುದ್ಧ ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ನೋಟೀಸ್ ನೀಡಿ ಒತ್ತುವರಿ ತೆರವುಗೊಳಿಸಲು ಆದೇಶ ಹೊರಡಿಸಲಾಗಿದ್ದು ತೆರವುಗೊಳಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಹಾಗೆಯೇ ತೆರವುಗೊಸದ ಜಮೀನನ್ನು ಸರ್ಕಾರ ವಶಕ್ಕೆ ಪಡೆದುಕೊಂಡು ಸ್ಥಳೀಯ ಅಭಿವೃದ್ಧಿಗೆ ಅವಶ್ಯಕವಾಗಿರುವ ಇಲಾಖೆಗೆ ಒದಗಿಸಲಾಗುವುದೆಂದು ಸಚಿ ವರು ಹೇಳಿದರು.

ಪಹೊ:ಬಿಜಿಪಿ:ಜಿಪಿಆರ್.

## ಅರಣ್ಯ ಪ್ರದೇಶ ವಾಸಿಗಳನ್ನು ಒಕ್ಕಲೆಬ್ಬಿಸುವುದಿಲ್ಲ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ಡಾ. ಕಸ್ತೂರಿ ರಂಗನ್ ವರದಿ ಅನುಷ್ಠಾನಗೊಂಡರೆ ಅರಣ್ಯ ಪ್ರದೇಶ ವಾಸಿಗಳನ್ನು ಒಕ್ಕಲೆಬ್ಬಿಸಲಾಗುತ್ತದೆ ಎಂಬುದು ಸತ್ಯಕ್ಕೆ ದೂರವಾದದು. ಯಾವುದೇ ಕಾರಣಕ್ಕೂ ಅರಣ್ಯ ವಾಸಿಗಳನ್ನು ಒಕ್ಕಲೆಬ್ಬಿಸಲಾಗುವುದಿಲ್ಲವೆಂದು ಅರಣ್ಯ ಸಚಿವ ಬಿ. ರಮಾನಾಥ್ ರೈ ಅವರು ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಅರಣ್ಯ ಪ್ರದೇಶ ಮತ್ತು ರಾಷ್ಟ್ರೀಯ ಉದ್ಯಾನವನದ ಆವಾಸ ಸ್ಥಾನದಲ್ಲಿ ವಾಸಿಸುವವರು ಯಾವುದೇ ಆತಂಕಪಡುವ ಅಗತ್ಯವಿಲ್ಲ. ಹಾಗೆಯೇ ಕೃಷಿಕರು ರಾಸಾಯನಿಕ ಗೊಬ್ಬರ, ಕೀಟನಾಶಕ ಬಳಸುವ ಬಗ್ಗೆ ಯಾವುದೇ ನಿರ್ಬಂಧವನ್ನು ವರದಿಯಲ್ಲಿ ಶಿಫಾರಸ್ಸು ಮಾಡಿರುವುದಿಲ್ಲವೆಂದು ಸಚಿವರು ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಐವನ್ ಡಿಸೋಜಾ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಸ್ತೂರಿ ರಂಗನ್ ವರದಿಯನ್ನು ಶಿಫಾರಸ್ಸು ಮಾಡಿ ಕೇಂದ್ರ ಸರ್ಕಾರಕ್ಕೆ ಕಳುಹಿಸುವ ಮುಂಚಿತವಾಗಿ ಅದರ ಸಾಧಕ

ಭಾದಕಗಳ ಬಗ್ಗೆ ಚರ್ಚಿಸುವ ಸಲುವಾಗಿ ತಮ್ಮ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ ಎಂದರು.

ಉಪ ಸಮಿತಿಯು ಹಲವು ಬಾರಿ ಸಭೆ ನಡೆಸಿ, ಕಸ್ತೂರಿ ರಂಗನ್ ವರದಿಯಲ್ಲಿ ಶೇಕಡ 20 ಕ್ಕಿಂತಲೂ ಹೆಚ್ಚು ಭೂ ಪ್ರದೇಶವು ಪರಿಸರ ಸೂಕ್ಷ್ಮ ಪ್ರದೇಶವೆಂದು ಪರಿಗಣಿಸಿರುವ ಬದಲಿಗೆ ಶೇಕಡ 50 ರಷ್ಟು ಅಥವಾ ಅದಕ್ಕಿಂತಲೂ ಹೆಚ್ಚಿನ ಭೂ ಪ್ರದೇಶವು ಪರಿಸರ ಸೂಕ್ಷ್ಮ ಪ್ರದೇಶವಾಗಿದ್ದಲ್ಲಿ ಆ ಗ್ರಾಮವನ್ನು ಪರಿಸರ ಸೂಕ್ಷ್ಮ ಪ್ರದೇಶವೆಂದು ಪರಿಗಣಿಸುವಂತೆ ಶಿಫಾರಸ್ಸು ಮಾಡಲಾಗಿದೆ. ಇದರಿಂದ ಕಸ್ತೂರಿ ರಂಗನ್ ವರದಿಯಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಿರುವ ಗ್ರಾಮಗಳ ಸಂಖ್ಯೆಯಲ್ಲಿಯೂ ಸಹ ಗಣನೀಯವಾಗಿ ಇಳಿಕೆಯಾಗಲಿದೆ ಎಂದು ಸಚಿವರು ಸದಸ್ಯರ ಪ್ರಶ್ನೆಗೆ ಉತ್ತರಿಸಿದರು.

ಕೇಂದ್ರಕ್ಕೆ ವರದಿ ನೀಡಬೇಕಿರುವ ಆರು ರಾಜ್ಯಗಳ ಪೈಕಿ ಒಂದು ರಾಜ್ಯ ಮಾತ್ರ ಕೇಂದ್ರ ಸರ್ಕಾರಕ್ಕೆ ವರದಿ ನೀಡಿದೆ. ರಾಜ್ಯ ಸರ್ಕಾರದ ನಿಲುವನ್ನು ಕೇಂದ್ರ ಸರ್ಕಾರಕ್ಕೆ ತಿಳಿಸಲು ಏಪ್ರಿಲ್ 15 ರವರೆಗೆ ಕಾಲಾವಕಾಶವಿರುವ ಹಿನ್ನೆಲೆಯಲ್ಲಿ ಸಂಪುಟ ಉಪ ಸಮಿತಿಯ ಸದಸ್ಯರು ಎರಡು ತಂಡಗಳಾಗಿ ಪಶ್ಚಿಮ ಘಟ್ಟದ ಪರಿಸರ ಸೂಕ್ಷ್ಮ ಪ್ರದೇಶಗಳಿಗೆ ಖುದ್ದು ಭೇಟಿನೀಡಿ ಸ್ಥಳೀಯ ಜನ ಪ್ರತಿನಿಧಿಗಳು, ಸರ್ಕಾರೇತರ ಸಂಸ್ಥೆಗಳು ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರೊಂದಿಗೆ ಸಭೆ ನಡೆಸಿ ಸಾಧಕ ಭಾದಕಗಳನ್ನು ಅರಿತ ನಂತರವೇ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದೆಂದು ಸಚಿವರು ಭರವಸೆ ನೀಡಿದರು.

ಪಹೊ:ಬಿಜಿಪಿ:ಜಿಪಿಆರ್.

## ವಿಧಾನ ಪರಿಷತ್ತಿನಲ್ಲಿ ವಿಶ್ವವಿದ್ಯಾನಿಲಯಗಳ ವಿಧೇಯಕ ಅಂಗೀಕಾರ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ವಿಧಾನಸಭೆಯಿಂದ ಅಂಗೀಕೃತವಾದ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ – ಅನ್ನು ವಿಧಾನ ಪರಿಷತ್ತಿನಲ್ಲಿಂದು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಉನ್ನತ ಶಿಕ್ಷಣ ಸಚಿವ ಆರ್. ವಿ. ದೇಶಪಾಂಡೆ ಅವರು ವಿಧಾನ ಪರಷತ್ತಿನಲ್ಲಿಂದು ವಿಧೇಯಕವನ್ನು ಪರ್ಯಾಲೋಚಿಸಬೇಕು ಹಾಗೂ ಅಂಗೀಕರಿಸಬೇಕೆಂದು ಸದನಕ್ಕೆ ಸೂಚಿಸಿದರು. ಪಕ್ಷಾತೀತರಾಗಿ ಈ ವಿಧೇಯಕದ ಕುರಿತು ಸದಸ್ಯರು ಚರ್ಚಿಸಿದ ನಂತರ ಸಭಾಪತಿಯವರು (ಧ್ವನಿ ಮತಕ್ಕೆ ಹಾಕುವ ಮೂಲಕ) ವಿಧೇಯಕದ ಅಂಗೀಕಾರ ವಿಧೇಯಕ ಅನುಮೋದನೆಗೊಂಡಿದೆ ಎಂದು ತಿಳಿಸಿದರು.

ಪಹೊ:ಬಿಜಿಪಿ:ಜಿಪಿಆರ್.

# ಹೈಕೋರ್ಟ್ ನ್ಯಾಯಮೂರ್ತಿಗಳಿಗೆ ಬೀಳ್ಕೊಡುಗೆ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ವರ್ಗಾವಣೆಯಾಗಿರುವ ಕರ್ನಾಟಕ ಉಚ್ಛನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಹುಲುವಾಡಿ ಜಿ. ರಮೇಶ್ ಅವರಿಗೆ ಫೆಬ್ರವರಿ 13 ರಂದು ಮಧ್ಯಾಹ್ನ 1-45 ಗಂಟೆಗೆ ಬೆಂಗಳೂರು ಉಚ್ಚನ್ಯಾಯಾಲಯದ ಆವರಣದಲ್ಲಿರುವ ಕೋರ್ಟ್ ಹಾಲ್ ನಂ. 1 ರಲ್ಲಿ ಕರ್ನಾಟಕ ಸ್ಟೇಟ್ ಬಾರ್ ಕೌನ್ಸಿಲ್ ಅಧ್ಯಕ್ಷರಿಂದ ಬೀಳ್ಕೊಡುಗೆ ಸಮಾರಂಭವನ್ನು ಏರ್ಪಡಿಸಲಾಗಿದೆ ಎಂದು ಕರ್ನಾಟಕ ಉಚ್ಚನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್ ಶ್ರೀ ಬಿ.ಎ. ಪಾಟೀಲ್ ಅವರು ತಿಳಿಸಿದ್ದಾರೆ.

ಬಾಬು/ಕೆಎಂ

# ಕ್ಷೇಮ ಪಾಲಕರ ಹುದ್ದೆಗೆ ನೇರ ಸಂದರ್ಶನ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಬೆಂಗಳೂರಿನ ವಿದ್ಯಾನಗರದಲ್ಲಿರುವ ಕ್ರೀಡಾ ವಸತಿ ಶಾಲೆ ಹಾಗೂ ಶ್ರೀ ಕಂಠೀರವ ಕ್ರೀಡಾಂಗಣದ ಸಂಕೀರ್ಣದಲ್ಲಿರುವ ಹಿರಿಯರ ಕ್ರೀಡಾ ವಸತಿ ನಿಲಯಕ್ಕೆ ಸಂಚಿತ ಗೌರವ ಧನದ ಆಧಾರದ ಮೇಲೆ ಕ್ಷೇಮಪಾಲಕರನ್ನು 179 ದಿನಗಳ ಅವಧಿಗೆ ನೇಮಿಸಿಕೊಳ್ಳಲಿದ್ದು ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಹ್ವಾನಿಸಿದೆ.

ಪದವೀಧರರು/ನಿವೃತ್ತ ಸೈನಿಕರು/ನಿವೃತ್ತ ಕ್ಷೇಮಪಾಲಕರಿಗೆ ಪ್ರಾಶಸ್ತ್ಯ ನೀಡಲಾಗುವುದು. ಎಲ್ಲಾ ಭತ್ಯೆಗಳೂ ಸೇರಿ ರೂ 12,000 ಗಳ ವೇತನ ನೀಡಲಾಗುವುದು.

ಫೆಬ್ರವರಿ 23 ರ ಮಧ್ಯಾಹ್ನ 3-00 ಗಂಟೆಗೆ ನಿರ್ದೇಶಕರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನೃಪತುಂಗಾ ರಸ್ತೆ, ಬೆಂಗಳೂರು – 560 001 ರಲ್ಲಿ ಸ್ವಯಂ ಅರ್ಜಿಯೊಂದಿಗೆ ಹಾಜರಾಗಲು ಕೋರಿದೆ.

ಪಹೊ:ಬಾಬು:ಜಿಪಿಆರ್.

# ಲೋಕಾಯುಕ್ತರ ಪ್ರವಾಸ

**ಬೆಂಗಳೂರು, ಫೆಬ್ರವರಿ 11 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಾಯುಕ್ತ ಡಾ. ವೈ. ಭಾಸ್ಕರ್ ರಾವ್ ಅವರು ಫೆಬ್ರವರಿ 19 ರಂದು ಬಳ್ಳಾರಿ ಹಾಗೂ ಫೆಬ್ರವರಿ 20 ರಂದು ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರವಾಸ ಮಾಡುವರು. ತಮ್ಮ ಪ್ರವಾಸದ ಅವಧಿಯಲ್ಲಿ ಲೋಕಾಯುಕ್ತರು ಮೇಲ್ಕಂಡ ಜಿಲ್ಲಾ ಕೇಂದ್ರಗಳಲ್ಲಿ ದೂರುದಾರರ ಅಹವಾಲುಗಳನ್ನು ಹಾಗೂ ಬಾಕಿ ಉಳಿದಿರುವ ಕಡತಗಳನ್ನು ಪರಿಶೀಲಿಸಿ ಅಧಿಕಾರಿಗಳೊಂದಿಗೆ ಚರ್ಚಿಸುವರು ಎಂದು ಲೋಕಾಯುಕ್ತ ಕಚೇರಿ ಪ್ರಕಟಣೆ ತಿಳಿಸಿದೆ.

ಪಹೊ:ಬಾಬು:ಜಿಪಿಆರ್.